# ಮಾಹಿತಿ ಕಾರ್ಯಕ್ರಮ ಯಶಸ್ವಿ




»ಜನಮಾಧ್ಯಮ, ಹಳಿಯಾಳ: ಸಂಪರ್ಕ ಕ್ಷೇತ್ರದಲ್ಲಿ ಎಲೆಕ್ಟ್ರಾನಿಕ್ಸ್ ಇಂಜಿನಿಯರ್ಸ್‌ಗಳಿಗೆ ವಿಫುಲ ಉದ್ಯೋಗ ಅವಕಾಶಗಳಿವೆ ಎಂದು ಜಿ. ಸುಮಾ ಹೇಳಿದರು. ಪಟ್ಟಣದ ಕೆ ಎಲ್ ಎಸ್ ವಿಡಿಐಟಿ ಮಹಾವಿದ್ಯಾಲಯದ ಎಲೆಕ್ಟ್ರಾನಿಕ್ಸ್ ಮತ್ತು ಕಮ್ಯುನಿಕೇಷನ್ ವಿಭಾಗವು ವಿದ್ಯಾರ್ಥಿಗಳಿಗೆ ಭವಿಷ್ಯದ ಉದ್ಯೋಗವಕಾಶಗಳ ಕುರಿತು ಅರಿವು ಮೂಡಿಸುವ ಕಾರ್ಯಕ್ರಮವನ್ನು ಇತ್ತೀಚೆಗೆ ಆಯೋಜಿಸಿತ್ತು. ಕಾರ್ಯಕ್ರಮಕ್ಕೆ ಸಂಪನ್ಮೂಲ ವ್ಯಕ್ತಿಯಾಗಿ ಶಿಕ್ಷಾಲೋಕಮ್ ಸಾಫ್ಟ್‌ವೇರ್ ಸಂಸ್ಥೆಯ ಉದ್ಯೋಗಿ ಹಾಗೂ ಮಾಜಿ ವಿದ್ಯಾರ್ಥಿ ಜಿ. ಸುಮಾ ಆಗಮಿಸಿದ್ದರು. ಸಂಪರ್ಕ ಹಾಗೂ ಎಲೆಕ್ಟ್ರಾನಿಕ್ಸ್ ಕ್ಷೇತ್ರದಲ್ಲಿ ವಿದ್ಯಾರ್ಥಿಗಳಿಗೆ ಹೇರಳ ಅವಕಾಶವಿದೆ, ವಿದ್ಯಾರ್ಥಿಗಳು ಔದ್ಯೋಗಿಕ ಕ್ಷೇತ್ರಕ್ಕೆ ಅವಶ್ಯವಿರುವ ಕೌಶಲ್ಯ ಹೊಂದುವಂತೆ ಸೂಚಿಸಿದರು. ಖಾಸಗಿ ಕ್ಷೇತ್ರಕ್ಕಷ್ಟೇ ಸೀಮಿತವಾಗದೆ ರಾಜ್ಯ ಹಾಗೂ ಕೇಂದ್ರ ಸರ್ಕಾರದ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಉತ್ತಮ ತಯಾರಿ ನಡೆಸುವಂತೆ ಕರೆ ನೀಡಿದರು. ವಿದ್ಯಾರ್ಥಿಗಳಿಗೆ ಕ್ಯಾಂಪಸ್ ಸಂದರ್ಶನಕ್ಕೆ ಹಾಗೂ ಶೈಕ್ಷಣಿಕ ಪ್ರಗತಿಗೆ ಅನುಕೂಲಕರವಾಗುವ ಪುಸ್ತಕವನ್ನು ಮಹಾವಿದ್ಯಾಲಯಕ್ಕೆ ದೇಣಿಗೆ ನೀಡಿದರು. ಮಾಜಿ ವಿದ್ಯಾರ್ಥಿಗಳು ಮಹಾವಿದ್ಯಾಲಯಕ್ಕೆ ಭೇಟಿ ನೀಡಿ ವಿದ್ಯಾರ್ಥಿಗಳಿಗೆ ಕೈಗಾರಿಕಾ ಕ್ಷೇತ್ರದಲ್ಲಿನ ನೂತನ ಆಗು ಹೋಗುಗಳ ಅರಿವು ಮೂಡಿಸುತ್ತಿರುವುದು ಸಂತಸದ ವಿಷಯ ಎಂದು ಪ್ರಾಚಾರ್ಯ ಡಾ. ವಿ ಎ ಕುಲಕರ್ಣಿ ಹೇಳಿದರು. ಎಲೆಕ್ಟ್ರಾನಿಕ್ಸ್ ಮತ್ತು ಕಮ್ಯುನಿಕೇಷನ್ ವಿಭಾಗದ ಮುಖ್ಯಸ್ಥ ಡಾ. ಮಹೇಂದ್ರ ದೀಕ್ಷಿತ್ ಕಾರ್ಯಕ್ರಮ ಆಯೋಜಿಸಿದ್ದರು. 60ಕ್ಕೂ ಅಧಿಕ ವಿದ್ಯಾರ್ಥಿಗಳು ಈ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.